<u>ಕರ್ನಾಟಕ ಸರ್ಕಾರದ ನಡವಳಿಗಳು</u>

ವಿಷಯ: ಕೊಡಗು ದಂತ ಮತ್ತು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ(ರಿ), ವೀರಾಜಪೇಟೆ, ಕೊಡಗು ಜಿಲ್ಲೆಯ ವಿದ್ಯಾರ್ಥಿಗಳಿಗೆ ಕ್ಲಿನಿಕಲ್ ಸೌಲಭ್ಯ ಒದಗಿಸುವ ಬಗ್ಗೆ.

<u>ಓದಲಾಗಿದೆ</u>: ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶಕರ ಪತ್ರ ಸಂಖ್ಯೆ: ಎಂಇಬಿ:74:97-98ರ ದಿನಾಂಕ 31-3-98.

<u>ಪ್ರಸ್ತಾವನೆ:</u>

ಮೇಲೆ ಓದಲಾದ ದಿನಾಂಕ 31-3-98ರ ಪತ್ರದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶಕರು, ಬೆಂಗಳೂರು, ಇವರು ಕೊಡಗು ದಂತ ಮತ್ತು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ (ರಿ), ವೀರಾಜಪೇಟೆ, ಕೊಡಗು ಜಿಲ್ಲೆಯ ವೀರಾಜಪೇಟೆ ಆಸ್ಪತ್ರೆಯು 240 ಹಾಸಿಗೆಗಳ ಸೌಲಭ್ಯ ಹೊಂದಿದ್ದು ಈ ಆಸ್ಪತ್ರೆಯು ಅಗತ್ಯವಿರುವ ಎಲ್ಲಾ ಸೌಲಭ್ಯ ಹೊಂದಿದ್ದು ಸದರಿ ಸಂಸ್ಥೆಯು ಪ್ರಾರಂಭಿಸಲು ಉದ್ದೇಶಿಸಿರುವ ದಂತ ಕಾಲೇಜಿನ ವಿದ್ಯಾರ್ಥಿಗಳಿಗೆ ಸಾರ್ವಜನಿಕ ಆಸ್ಪತ್ರೆ, ವೀರಾಜಪೇಟೆ, ಕೊಡಗು ಜಿಲ್ಲೆ ಇಲ್ಲಿ ಕ್ಲಿನಿಕಲ್ ಸೌಲಭ್ಯ ಪಡೆಯಲು ನಿಯಮಾನುಸಾರ ಅನುಮತಿ ನೀಡಲು ಕ್ರಮ ತೆಗೆದುಕೊಳ್ಳಬೇಕೆಂದು ಕೋರಿದ್ದಾರೆ. ಆದುದರಿಂದ ಈ ಆದೇಶ.

ಸರ್ಕಾರಿ ಆದೇಶ ಸಂಖ್ಯೆ: ಆಕುಕ 97 ಸಿಜಿಎಂ 98,
<u>ಬೆಂಗಳೂರು, ದಿನಾಂಕ: 17ನೇ ಏಪ್ರಿಲ್ 1998.</u>

ಮೇಲೆ ಓದಲಾದ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕುಷವಾಗಿ ಪರಿಶೀಲಿಸಿ ಕೊಡಗು ದಂತ ಮತ್ತು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ (ರಿ) ವೀರಾಜಪೇಟೆ, ಕೊಡಗು ಜಿಲ್ಲೆ, ಇವರ ದಂತ ಕಾಲೇಜಿನ ವಿದ್ಯಾರ್ಥಿಗಳಿಗೆ ಕೊಡಗುಜಿಲ್ಲೆಯ ವಿರಾಜಪೇಟೆಯ ಸರ್ಕಾರಿ ಆಸ್ಪತ್ರೆಯಲ್ಲಿ ಸದರಿ ಕಾಲೇಜನ್ನು ಪ್ರಾರಂಭಿಸಲು ಸರ್ಕಾರವು ಅನುಮತಿ ನೀಡಿದಲ್ಲಿ ಸದರಿ ಕಾಲೇಜಿನ ವಿದ್ಯಾರ್ಥಿಗಳಿಗೆ ಒಂದು ವರ್ಷ ಅವಧಿಗೆ ಕ್ಲಿನಿಕಲ್ ಶುಲ್ಕವನ್ನು ಪಾವತಿ ಮಾಡಬೇಕೆಂಬ ಷರತ್ತಿಗೊಳಪಡಿಸಿ ಕ್ಲಿನಿಕಲ್ ಸೌಲಭ್ಯ ಪಡೆಯಲು ಸರ್ಕಾರದ ಮಂಜೂರಾತಿ ನೀಡಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು
ಅವರ ಹೆಸರಿನಲ್ಲಿ,
[signature] 17/4/98
(ಆರ್. ನಾರಾಯಣ ಮೂರ್ತಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ,
(ಆರೋಗ್ಯ)
17/4/98

ಗೆ:

1. ನಿರ್ದೇಶಕರು, ವೈದ್ಯಕೀಯ ಶಿಕ್ಷಣ, ಬೆಂಗಳೂರು.
2. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು.
3. ಕುಲಸಚಿವರು, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಜಯನಗರ, 4ನೇ ಟಿ ಬ್ಲಾಕ್, ಬೆಂಗಳೂರು.
4. ವೈದ್ಯಾಧಿಕಾರಿಗಳು, ಸಾರ್ವಜನಿಕ ಆಸ್ಪತ್ರೆ, ವೀರಾಜಪೇಟೆ, ಕೊಡಗು ಜಿಲ್ಲೆ.
5. ಕಾರ್ಯದರ್ಶಿ, : ಅಧ್ಯಕ್ಷರು, ಕೊಡಗು ದಂತ ಕಾಲೇಜು, ವೀರಾಜಪೇಟೆ, ಕೊಡಗು ಜಿಲ್ಲೆ.
6. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ ಬೆಂಗಳೂರು.
7. ಕಾರ್ಯದರ್ಶಿ : ಉಪ ಕಾರ್ಯದರ್ಶಿ (ವೈದ್ಯಕೀಯ ಶಿಕ್ಷಣ) ಮತ್ತು (ಆರೋಗ್ಯ), ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು.
8. ಶಾಖಾ ರಕ್ಷಾ ಕಡತ : ಹೆಚ್ಚುವರಿ ಪ್ರತಿಗಳು.

ಆರ್‌ಸಿ

[illegible] to be attached

**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಕೂರ್ಗ್ ಇನ್ಸ್ಟಿಟ್ಯೂಟ್ ಆಫ್ ಡೆಂಟಲ್ ಸೈನ್ಸ್, ವಿರಾಜಪೇಟೆ ಇವರ ವಿದ್ಯಾರ್ಥಿಗಳಿಗೆ ಕ್ಲಿನಿಕಲ್ ಸೌಲಭ್ಯವನ್ನು ಮುಂದುವರೆಸುವ ಬಗ್ಗೆ

**ಓದಲಾಗಿದೆ:**
1. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಾಲಯ, ಭಾರತ ಸರ್ಕಾರ ಇವರ ಅಧಿಸೂಚನೆ ಸಂಖ್ಯೆ: :F.No.V.12017/8/98-PMS ದಿನಾಂಕ: 21.07.2004
2. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರ ಪತ್ರ ಸಂಖ್ಯೆ: ಎಂಡಿಪಿ(ಕ್ಲಿ)/ 41/ 2011-12, ದಿನಾಂಕ: 19.08.2011.

*****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ(1) ರಲ್ಲಿ ಕೇಂದ್ರ ಸರ್ಕಾರದ ಅಧಿಸೂಚನೆಯಲ್ಲಿ ಕೂರ್ಗ್ ಇನ್ಸ್ಟಿಟ್ಯೂಟ್ ಆಫ್ ಡೆಂಟಲ್ ಸೈನ್ಸ್, ವಿರಾಜಪೇಟೆ ಇವರ ವಿದ್ಯಾರ್ಥಿಗಳಿಗೆ ಕ್ಲಿನಿಕಲ್ ಸೌಲಭ್ಯ ಪ್ರಾರಂಭಿಸಲು ಸಂಯೋಜನೆ ನೀಡಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(2) ರಲ್ಲಿನ ಪ್ರಸ್ತಾವನೆಯಲ್ಲಿ ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು ಇವರು ಕೂರ್ಗ್ ಇನ್ಸ್ಟಿಟ್ಯೂಟ್ ಆಫ್ ಡೆಂಟಲ್ ಸೈನ್ಸ್, ವಿರಾಜಪೇಟೆ ಇವರ ವಿದ್ಯಾರ್ಥಿಗಳಿಗೆ ಸಾರ್ವಜನಿಕ ಆಸ್ಪತ್ರೆ, ವಿರಾಜಪೇಟೆ ಇಲ್ಲಿ ಕ್ಲಿನಿಕಲ್ ಸೌಲಭ್ಯವನ್ನು ಮುಂದುವರೆಸುವ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ

ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಆಕುಕ 195 ಸಿಜಿಇ 2011,**
**ಬೆಂಗಳೂರು, ದಿನಾಂಕ: 05.12..2011**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕೂರ್ಗ್ ಇನ್ಸ್ಟಿಟ್ಯೂಟ್ ಆಫ್ ಡೆಂಟಲ್ ಸೈನ್ಸ್, ವಿರಾಜಪೇಟೆ ಇವರ ವಿದ್ಯಾರ್ಥಿಗಳಿಗೆ ಸಾರ್ವಜನಿಕ ಆಸ್ಪತ್ರೆ, ವಿರಾಜಪೇಟೆ ಇಲ್ಲಿ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಕ್ಲಿನಿಕಲ್ ಸೌಲಭ್ಯವನ್ನು ಒದಗಿಸಲು ಸರ್ಕಾರ ಮಂಜೂರಾತಿ ನೀಡಿದೆ.

1) ನೀಡಲಾಗಿರುವ ಕ್ಲಿನಿಕಲ್ ಸೌಲಭ್ಯದ ಅವಧಿಯು ಮೂರು ವರ್ಷಗಳಿಗೆ ಮಾತ್ರ ಸೀಮಿತವಾಗಿರುತ್ತದೆ.

2) ಪ್ರಸ್ತುತ ವರ್ಷದಲ್ಲಿ ಈ ಕಾಲೇಜು ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ನಿಗಧಿತ ಶುಲ್ಕದ ಹಣವನ್ನು ಪೂರ್ಣ ಮತ್ತು ಮುಂಗಡವಾಗಿಯೇ ಪಾವತಿಸಿಕೊಂಡ ನಂತರವೇ ಸಂಸ್ಥೆಯ ವಿದ್ಯಾರ್ಥಿಗಳಿಗೆ ಕ್ಲಿನಿಕಲ್ ಸೌಲಭ್ಯ ನೀಡತಕ್ಕದ್ದು. ತಪ್ಪಿದ್ದಲ್ಲಿ ಸಂಬಂಧಿಸಿದ ವೈದ್ಯಾಧಿಕಾರಿಗಳು ಹೊಣೆಗಾರರಾಗಿರುತ್ತಾರೆ.

3)ಕ್ಲಿನಿಕಲ್ ಸೌಲಭ್ಯ ನೀಡಿದ ಅವಧಿಯಲ್ಲಿ ವಿದ್ಯಾರ್ಥಿಗಳಿಂದ ಆಸ್ಪತ್ರೆಗೆ ನಷ್ಟ ಉಂಟಾದಲ್ಲಿ ಈ ನಷ್ಟವನ್ನು ಸದರಿ ಸಂಸ್ಥೆಯೇ ಭರಿಸತಕ್ಕದ್ದು.

4)ಸದರಿ ಆದೇಶವನ್ನು ಹೊರಡಿಸಿದ ಮೂರು ತಿಂಗಳೊಳಗಾಗಿ ಕ್ಲಿನಿಕಲ್ ಸೌಲಭ್ಯವನ್ನು ಉಪಯೋಗಿಸಿಕೊಳ್ಳದೇ ಹೋದಲ್ಲಿ ಈ ಆದೇಶವನ್ನು ರದ್ದುಗೊಳಿಸಿದೆಯೆಂದು ಭಾವಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಪಿ. ನಾರಾಯಣ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.

ಇವರಿಗೆ:

1. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು.
2. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು.
3. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ, ಕೊಡಗು ಜಿಲ್ಲೆ
4. ಆಡಳಿತ ವೈದ್ಯಾಧಿಕಾರಿಗಳು, ಸಾರ್ವಜನಿಕ ಆಸ್ಪತ್ರೆ, ವಿರಾಜಪೇಟೆ.
5. ಪ್ರಾಂಶುಪಾಲರು, ಕೂರ್ಗ್ ಇನ್ಸ್ಟಿಟ್ಯೂಟ್ ಆಫ್ ಡೆಂಟಲ್ ಸೈನ್ಸ್, ವಿರಾಜಪೇಟೆ, ಕೊಡಗು ಜಿಲ್ಲೆ.
6. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.